# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಗಣಕಯಂತ್ರಗಳ ಖರೀದಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
3. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಇವರ ಪತ್ರ ಸಂಖ್ಯೆ:ಕೆಜಿಎಸ್‌ಸಿ.I/12-13, ದಿನಾಂಕ: 19/7/2012.

ಪ್ರಸ್ತಾವನೆ :

ಮೇಲೆ ಓದಲಾದ(1) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ, 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ (2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ(3) ರಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಇವರು ಸರ್ಕಾರಕ್ಕೆ ಪತ್ರ ಬರೆದು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 66 ಇಕಾಅ 2012, ದಿನಾಂಕ: 2/4/2012 ರಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ರ ಪರಿಣಾಮಕಾರಿ ಅನುಷ್ಠಾನಕ್ಕೆ, ಗಣಕಯಂತ್ರಗಳು, ಪ್ರಿಂಟರ್ ಹಾಗೂ ಯುಪಿಎಸ್‌ಗಳ ಖರೀದಿಗಾಗಿ ರೂ.12,55,830/- ಗಳನ್ನು ಬಿಡುಗಡೆ ಮಾಡಲಾಗಿದೆ. ಆದರೆ ಈ ಜಿಲ್ಲೆಯಲ್ಲಿ 9 ಸೆಟ್‌ಗಳನ್ನು ಅಗ್ನಿಶ್ಯಾಮಕ ಇಲಾಖೆಗೆ ಹಾಗೂ 11 ಸೆಟ್‌ಗಳನ್ನು ಕಂದಾಯ ಇಲಾಖೆಗೆ ಒಟ್ಟಾರೆ 20 ಸೆಟ್‌ಗಳನ್ನು ಖರೀದಿಸಿದ್ದು, ಒಟ್ಟಾರೆ ವೆಚ್ಚ ರೂ.17,10,849/-ಗಳನ್ನು ಪಾವತಿಸಲಾಗಿದೆ. ಹೆಚ್ಚುವರಿಯಾಗಿ ಪಾವತಿಸಿರುವ ರೂ.4,55,019/-(ನಾಲ್ಕು ಲಕ್ಷದ ಐವತ್ತೈದು ಸಾವಿರದ ಹತ್ತೊಂಬತ್ತು ರೂಪಾಯಿಗಳು ಮಾತ್ರ) ಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಅದರಂತೆ ಪಾವತಿಸಲು ಸರ್ಕಾರದಲ್ಲಿ ಪರಿಶೀಲಿಸಿದೆ.

ಆದ್ದರಿಂದ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 196 ನಾಸೇಖಾ 2013,**
**ಬೆಂಗಳೂರು, ದಿನಾಂಕ : 03/08/2013**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಇವರ ಕಛೇರಿಗೆ ಗಣಕಯಂತ್ರಗಳು, ಪ್ರಿಂಟರ್ ಹಾಗೂ ಯುಪಿಎಸ್‌ಗಳ ಖರೀದಿಗಾಗಿ ಹೆಚ್ಚುವರಿಯಾಗಿ ಪಾವತಿಸಿರುವ ಮೊತ್ತ ರೂ.4,55,019/- (ನಾಲ್ಕು ಲಕ್ಷದ ಐವತ್ತೈದು ಸಾವಿರದ ಹತ್ತೊಂಬತ್ತು ರೂಪಾಯಿಗಳು ಮಾತ್ರ) ಗಳನ್ನು ಬಿಡುಗಡೆ ಮಾಡುವಂತೆ ಮಂಜೂರಾತಿ ನೀಡಲಾಗಿದೆ.

ಮೇಲಿನ ವೆಚ್ಚವನ್ನು ಲೆಕ್ಕಶೀರ್ಷಿಕೆ "2052-00-090-0-26-051" (ಯೋಜನೇತರ) "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಅನುಷ್ಠಾನದಡಿ 2013-14ನೇ ಸಾಲಿಗೆ ಒದಗಿಸಿರುವ ಅನುದಾನದಡಿ ಭರಿಸುವುದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ:27/04/2012 ಹಾಗೂ ಎಫ್.ಡಿ 01 ಟಿಎಫ್‌ಪಿ 2013, ದಿನಾಂಕ: 20.04.2013ರ ಸರ್ಕಾರದ ಆದೇಶಗಳಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎನ್. ವರಪ್ರಸಾದ್ ರೆಡ್ಡಿ)
ಆಡಳಿತಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ನಾಗರೀಕ ಸೇವೆಗಳು)

ಇವರಿಗೆ :

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ
5. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ(ಆಸು) ಬಹುಮಹಡಿ ಕಟ್ಟಡ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಮ್.ಸಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
9. ಆಡಳಿತಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಸಕಾಲ ಮಂಡಳಿ, ಸಿಆಸುಇ(ಆಸು), ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
11. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.